MANGALORE UNIVERSITY

PROCEEDINGS OF THE FIRST REGULAR MEETING OF THE ACADEMIC COUNCIL FOR THE YEAR 2016-17 HELD ON 26-7-2016 AT THE NEW SENATE HALL, MANGALORE UNIVERSITY ADMINISTRATIVE BLOCK AT 11:00 AM

Honourable Vice Chancellor extended a welcome to all members, invitees and representatives pf the media to the meeting

AGENDA NO: ACC Gen Meet 1:7 (2016-17)

Subject: PhD Course Work Syllabus of Geography – Approval reg.

Resolution: Approved

AGENDA NO: ACC Gen Meet 1:8 (2016-17)

Subject: Mangalore University's 2 years (4 Semesters) Postgraduate Degree Programmes – the Regulations framed for Choice based credit system as per UGC - Reg.

Resolution: Regulations were approved. Practicals with 2 credits as recommended by the Faculty of Science and Technology in its meeting held on 13-7-2016 were approved. But, as seminar is part of internal assessment, recommendation to assign 1 credit for Seminar was shelved.

AGENDA NO: ACC Gen Meet 1:14 (2016-17)

Subject: Mangalore University MSc Applied Zoology and Applied Botany Departments to offer MSc Zoology and MSc Botany from the academic year 2016-17 – Reg.

Resolution: Approved. Chairpersons of the BOS were asked to give a press statement to this effect.

AGENDA NO: ACC Gen Meet 1:25 (2016-17)

Subject: Faculty of Education Programmes as per UGC Regulations for Choice based credit system Revised Syllabus -Approval reg.

Resolution: The PG Programmes' Syllabi under Faculty of Education were approved.

Registrar
Mangalore University
MangalaGangothri - 574199

AGENDA NO: ACC Gen Meet 1:26 (2016-17)

Subject: Faculty of Commerce Programmes as per UGC Regulations for Choice based credit system Revised Syllabus -Approval reg.

Resolution: The PG Programmes' Syllabi under Faculty of Commerce were approved.

AGENDA NO: ACC Gen Meet 1:29 (2016-17)

Subject: Faculty of Arts Programmes as per UGC Regulations for Choice based credit system Revised Syllabus -Approval reg.

Resolution: The PG Programmes' Syllabi under Faculty of Arts were approved. The Chairperson of BOS was asked to discuss the suggestion of a member of the Academic Council with regard to MSW Syllabus with the Dean of Arts and take necessary action.

AGENDA NO: ACC Gen Meet 1:30 (2016-17)

Subject: Faculty of Science and Technology Programmes as per UGC Regulations for Choice based credit system Revised Syllabus -Approval reg.

Resolution: The PG Programmes' Syllabi under Faculty of Science and Technology were approved.

Sd/-

Registrar

Sd/-

Vice Chancellor

This is a true transcript of excerpts of the above-mentioned meeting relating to Curriculum

Registrar

Registrar
Mangalore University
MangalaGangothri - 574199

MANGALORE UNIVERSITY

PROCEEDINGS OF THE THIRD REGULAR MEETING OF THE ACADEMIC COUNCIL FOR THE YEAR 2018-19 HELD ON 1-2-2019 AT THE NEW SENATE HALL, MANGALORE UNIVERSITY ADMINISTRATIVE BLOCK AT 11:00 AM

Honourable Vice Chancellor extended a welcome to all members, invitees and media and press persons to the meeting

III Matters from Vice Chancellor, Syndicate, Faculties and Boards of Studies

AGENDA NO: ACC Gen Meet 3:10 (2018-19)

Subject: PhD Yogic Science Course Work Revised Syllabus- Approval reg

Resolution: PhD Yogic Science Course Work Revised Syllabus were approved.

AGENDA NO: ACC Gen Meet 3:11 (2018-19)

Subject: PG Diploma in Yogic Science – Revised Syllabus reg.

Resolution: PG Diploma in Yogic Science Revised syllabus was approved with the condition to add Power to removal of difficulties column.

AGENDA NO: ACC Gen Meet 3:62 (2018-19)

Subject: MSc Electronics Revised Syllabus introducing new courses – Approval reg.

Resolution: Revised Syllabus was approved.

AGENDA NO: ACC Gen Meet 3:77 (2018-19)

Subject: MA Kannada -Revised Syllabus - Dissertation Reg

Resolution: Revised Syllabus was approved by adding Dissertation and incorporating some corrections in the Structure.

AGENDA NO: ACC Gen Meet 3:78 (2015-16)

Subject: MSc Mathematics Revised Syllabus - addition of Practical Syllabus - Reg.



Registrar
Mangalore University
MangalaGangothri - 574199

Resolution: Revised Syllabus was approved with addition of Practical MTS 559 Mathematical Statistics course, with the condition that statistical experts should teach the Course.

Sd/-

Registrar

Sd/-

Vice Chancellor

This is a true transcript of excerpts of the above-mentioned meeting relating to curriculum.

Registrar

Registrar
Mangalore University
MangalaGangothri - 574199



Registrar
Mangalore University
MangalaGangothri - 574199

# ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 26.07.2016ರಂದು ಪೂರ್ವಾಹ್ನ ಗಂಟೆ 11:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಹೊಸ ಸೆನೆಟ್ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2016-17ನೇ ಸಾಲಿನ ಪ್ರಥಮ ಸಾಮಾನ್ಯ ಸಭೆಯ ನಡಾವಳಿಗಳು.**

**ಉಪಸ್ಥಿತ ಸದಸ್ಯರು:**

**ಅನುಪಸ್ಥಿತ ಸದಸ್ಯರು:**

ಮಾನ್ಯ ಕುಲಪತಿಯವರು ಎಲ್ಲಾ ಸದಸ್ಯರನ್ನು, ಆಹ್ವಾನಿತರನ್ನು ಹಾಗೂ ಮಾಧ್ಯಮ ಪ್ರತಿನಿಧಿಗಳನ್ನು ಸಭೆಗೆ ಸ್ವಾಗತಿಸಿದರು.

**ಪ್ರಾರಂಭಿಕ**

I. ಡಾ. ಕೆ. ಎಂ. ಲೋಕೇಶ್, ಪ್ರಾಧ್ಯಾಪಕರು, ಸ್ನಾತಕೋತ್ತರ ಇತಿಹಾಸ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರು ಸರ್ಕಾರದ ಆದೇಶ ಸಂಖ್ಯೆ ಇಡಿ 80 ಯುಡಿವಿ 2016 ದಿನಾಂಕ 20.06.2016ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರಾಗಿ ನೇಮಕಗೊಂಡಿರುವ ವಿಚಾರವನ್ನು ಮಾನ್ಯ ಕುಲಪತಿಯವರು ಸಭೆಗೆ ತಿಳಿಸಿ ನೂತನ ಕುಲಸಚಿವರನ್ನು ಸಭೆಗೆ ಸ್ವಾಗತಿಸಿದರು.

II. ದಿನಾಂಕ 04.06.2016ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ ಹುದ್ದೆಯ ಪ್ರಭಾರವನ್ನು ವಹಿಸಿಕೊಂಡಿರುವ ಡಾ. ಶ್ರೀಪತಿ ಕಲ್ಲೂರಾಯ, ಪ್ರಾಧ್ಯಾಪಕರು, ಸ್ನಾತಕೋತ್ತರ ಅರ್ಥಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಮಾನ್ಯ ಕುಲಪತಿಯವರು ಸ್ವಾಗತಿಸಿದರು.

III. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1)(ix)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಡೀನರ ನೆಲೆಯಲ್ಲಿ ಸದಸ್ಯರಾಗಿ ನಾಮನಿರ್ದೇಶನಗೊಂಡಿರುವ ಡಾ. ಜೆ. ಈಶ್ವರ ಭಟ್, ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ಹಾಗೂ ಪ್ರಾಧ್ಯಾಪಕರು, ಸ್ನಾತಕೋತ್ತರ ರಸಾಯನಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರನ್ನು ಮಾನ್ಯ ಕುಲಪತಿಯವರು ಸ್ವಾಗತಿಸಿದರು.

IV. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30 (1)(V)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಯ ಸದಸ್ಯರುಗಳಾಗಿ ನಾಮನಿರ್ದೇಶನಗೊಂಡಿರುವ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಐವನ್ ಡಿ ಸೋಜ, ಲಿಲ್ಲಿ ಫಾತಿಮಾ ಲೇನ್, ಕಂಕನಾಡಿ ಅಂಚೆ, ಮಂಗಳೂರು - 575 002 ಮತ್ತು ಶ್ರೀ ಎಂ. ಪಿ. ಸುನಿಲ್ ಸುಬ್ರಮಣಿ, ಕಾಮಧೇನು, ಜಯನಗರ, ಮಡಿಕೇರಿ - 571 201 ಇವರನ್ನು ಮಾನ್ಯ ಕುಲಪತಿಯವರು ಸ್ವಾಗತಿಸಿದರು.

V. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1)(vi)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಮಾನ್ಯ ಕುಲಪತಿಯವರಿಂದ ನಾಮನಿರ್ದೇಶನಗೊಂಡಿರುವ

1. ಡಾ. ಪಿ. ವೆಂಕಟರಮಣ ಗೌಡ, ಪ್ರಾಂಶುಪಾಲರು, ಶ್ರೀ ಭುವನೇಂದ್ರ ಕಾಲೇಜು, ಕಾರ್ಕಳ - 574 104.

2. ಡಾ. ವರದರಾಜ ಸಿ. ಹೆಚ್., ಪ್ರಾಂಶುಪಾಲರು, ಸರಕಾರಿ ಪ್ರಥಮ ದರ್ಜೆ ಕಾಲೇಜು, ಬೆಟ್ಟಂಪಾಡಿ, ಪುತ್ತೂರು ತಾಲೂಕು - 574 259.

3. ಡಾ. ಟಿ. ಎ. ಸುಬ್ಬರಾವ್, ಪ್ರಾಂಶುಪಾಲರು, ಡಾ. ಎಂ. ವಿ. ಶೆಟ್ಟಿ ಕಾಲೇಜ್ ಆಫ್ ಸ್ಪೀಚ್ ಆ್ಯಂಡ್ ಹಿಯರಿಂಗ್, ವಿದ್ಯಾನಗರ, ಪಂಜಿಮೊಗರು, ಕೂಳೂರು, ಮಂಗಳೂರು - 575 013

ಇವರುಗಳನ್ನು ಶೈಕ್ಷಣಿಕ ಮಂಡಳಿ ಸಭೆಗೆ ಸ್ವಾಗತಿಸಲಾಯಿತು.

VI. 1. ದಿನಾಂಕ 30.10.2015 ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಕುಲಸಚಿವರಾಗಿ ಕಾರ್ಯ ನಿರ್ವಹಿಸಿದ್ದ ಹಾಗೂ ದಿನಾಂಕ 21.06.2016ರಂದು ಕುಲಸಚಿವರ ಕರ್ತವ್ಯದಿಂದ ಬಿಡುಗಡೆಗೊಂಡ ಪ್ರೊ. ಟಿ. ಡಿ. ಕೆಂಪರಾಜು, ಇವರ ಸೇವೆಯನ್ನು ಕೃತಜ್ಞತಾಪೂರ್ವಕವಾಗಿ ದಾಖಲಿಸಲಾಯಿತು.

2. ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1) (vi)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಮಾನ್ಯ ಕುಲಪತಿಯವರಿಂದ ನಾಮ ನಿರ್ದೇಶನಗೊಂಡು ಹಾಗೂ ಶೈಕ್ಷಣಿಕ ಮಂಡಳಿಯ ಸದಸ್ಯತ್ವದಿಂದ ಬಿಡುಗಡೆಗೊಂಡ ಈ ಕೆಳಗಿನ ಸದಸ್ಯರ ಸೇವೆಯನ್ನು ಕೃತಜ್ಞತಾಪೂರ್ವಕವಾಗಿ ದಾಖಲಿಸಲಾಯಿತು.

1. ಡಾ. ಟಿ. ಜಯಪ್ರಕಾಶ್ ರಾವ್, ಪ್ರಾಂಶುಪಾಲರು, ಎ. ಜೆ. ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್, ಕೊಟ್ಟಾರ ಚೌಕಿ, ಮಂಗಳೂರು 575 006
2. ಡಾ. ನೆರಿ ಕಾರ್ನಲಿಯೋ, ಪ್ರಾಂಶುಪಾಲರು, ಮಿಲಾಗ್ರಿಸ್ ಕಾಲೇಜು, ಕಲ್ಯಾಣಪುರ - 576 114
3. ಡಾ. ಫರೀಟಾ ಎನ್. ಎಫ್. ವೇಗಸ್, ಪ್ರಾಂಶುಪಾಲರು, ಸೈಂಟ್ ಅಲೋಶಿಯಸ್ ಇನ್‌ಸ್ಟಿಟ್ಯೂಟ್ ಆಫ್ ಎಜ್ಯುಕೇಶನ್, ಮಂಗಳೂರು - 575 003.

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1)(X)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ವಿದ್ಯಾರ್ಥಿ ಪ್ರತಿನಿಧಿಗಳ ನೆಲೆಯಲ್ಲಿ ಸದಸ್ಯರಾಗಿ ನಾಮನಿರ್ದೇಶನಗೊಂಡು ಹಾಗೂ ಶೈಕ್ಷಣಿಕ ಮಂಡಳಿಯ ಸದಸ್ಯತ್ವದಿಂದ ಬಿಡುಗಡೆಗೊಂಡ ಈ ಕೆಳಗಿನ ವಿದ್ಯಾರ್ಥಿಗಳ ಸೇವೆಯನ್ನು ಕೃತಜ್ಞತಾಪೂರ್ವಕವಾಗಿ ದಾಖಲಿಸಲಾಯಿತು.

1. ಕು. ಫಾತಿಮಾ ಶಿಬಿನ್ ಕುರಿಕಲ್, ತೃತೀಯ ಬಿ.ಬಿ.ಎಂ., ಶ್ರೀನಿವಾಸ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್, ಪಾಂಡೇಶ್ವರ, ಮಂಗಳೂರು - 575 001 (ವೃತ್ತಿಪರ ಮತ್ತು ಪದವಿ ಕೋರ್ಸು)
2. ರಾಘವೇಂದ್ರ, ತೃತೀಯ ಬಿ.ಕಾಂ., ಶ್ರೀಮತಿ ರುಕ್ಮಿಣಿ ಶೆಡ್ತಿ ಮೆಮೋರಿಯಲ್ ನ್ಯಾಷನಲ್ ಸರಕಾರಿ ಪ್ರಥಮ ದರ್ಜೆ ಕಾಲೇಜು, ಬಾರ್ಕೂರು - 576 210 (ಎನ್. ಸಿ. ಸಿ.)
3. ಯಜ್ಞಶ್ರೀ, ತೃತೀಯ ಬಿ.ಕಾಂ., ಶ್ರೀ ನಿರಂಜನ ಸ್ವಾಮಿ ಪ್ರಥಮ ದರ್ಜೆ ಕಾಲೇಜು, ಸುಂಕದಕಟ್ಟೆ, ಕೊಳಂಬೆ - 574 142 (ರಾಷ್ಟ್ರೀಯ ಸೇವಾ ಯೋಜನೆ)
4. ಶ್ರೀ ಅಮರ್ ಪರಶುರಾಮ್ ಚಾವನ್, ತೃತೀಯ ಬಿ.ಎಸ್ಸಿ., ಶ್ರೀ ಮಹಾವೀರ ಪ್ರಥಮ ದರ್ಜೆ ಕಾಲೇಜು, ಮೂಡಬಿದರೆ - 574 197 (ಕ್ರೀಡೆ).
5. ಕು. ಪ್ರೀಣೀತ ಜೈನ್ ಕೆ., ಪ್ರಥಮ ಎಂ.ಎಸ್ಸಿ. ರಸಾಯನಶಾಸ್ತ್ರ ವಿಭಾಗ, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು - 575 001 (ಸ್ನಾತಕೋತ್ತರ ಕೋರ್ಸ್)

ಸಂತಾಪ ಸೂಚಕ ನಿರ್ಣಯ

ಮಂಗಳೂರು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿ (ಪ್ರಭಾರ) ಹುದ್ದೆಯಲ್ಲಿ ದಿನಾಂಕ 09.04.2015ರಿಂದ ಕರ್ತವ್ಯ ನಿರ್ವಹಿಸುತ್ತಿದ್ದ ಡಾ. ಪಿ. ಎ. ರೇಗೋ, ಪ್ರಾಧ್ಯಾಪಕರು, ಸ್ನಾತಕೋತ್ತರ ಅರ್ಥಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಇವರು ದಿನಾಂಕ 23.05.2016ರಂದು ಅಕಾಲ ನಿಧನರಾಗಿರುತ್ತಾರೆ.

ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಡೀನರ ನೆಲೆಯಲ್ಲಿ ಸದಸ್ಯರಾಗಿದ್ದ ಪ್ರೊ. ಕೆ. ಕೆ. ವಿಜಯಲಕ್ಷ್ಮಿ, ಡೀನರು, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯ ಇವರು ದಿನಾಂಕ 21.04.2016ರಂದು ಅಕಾಲ ನಿಧನರಾಗಿರುತ್ತಾರೆ.

ಇವರುಗಳು ತಮ್ಮ ಸೇವಾ ಅವಧಿಯಲ್ಲಿ ವಿಭಾಗದ ಅಧ್ಯಕ್ಷರು, ಶೈಕ್ಷಣಿಕ ಮಂಡಳಿ ಸದಸ್ಯತ್ವ, ವಿಶ್ವವಿದ್ಯಾನಿಲಯದ ವಿವಿಧ ಪ್ರಾಧಿಕಾರಗಳ ಸದಸ್ಯರಾಗಿ ವಿಶ್ವವಿದ್ಯಾನಿಲಯದ ಆಡಳಿತ ಮತ್ತು ಶೈಕ್ಷಣಿಕ ಬೆಳವಣಿಗೆಯಲ್ಲಿ ಪ್ರಮುಖ ಪಾತ್ರ ವಹಿಸಿರುತ್ತಾರೆ. ಇವರ ನಿಧನಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಮತ್ತು ಆಡಳಿತ ವರ್ಗವು ತನ್ನ ಸಂತಾಪವನ್ನು ವ್ಯಕ್ತಪಡಿಸುತ್ತಾ, ಅಗಲಿದ ದಿವ್ಯಾತ್ಮಕ್ಕೆ ಪರಮಾತ್ಮನು ಚಿರಶಾಂತಿಯನ್ನು ನೀಡಲೆಂದೂ, ಹಾಗೂ ಇವರ ಅಗಲಿಕೆಯ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಕುಟುಂಬಸ್ಥರಿಗೆ ನೀಡಲಿ ಎಂದು ಕೋರುವ ಸಂತಾಪ ಸೂಚಕ ನಿರ್ಣಯವನ್ನು ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಅಂಗೀಕರಿಸಿ ಶ್ರದ್ಧಾಂಜಲಿ ಅರ್ಪಿಸಲಾಯಿತು.

I ಘನತೆವೆತ್ತ ಕುಲಾಧಿಪತಿಯವರಿಂದ ಅನುಮೋದನೆ ಪಡಕೊಂಡ ಪರಿನಿಯಮಗಳು / ವಿನಿಯಮಗಳ ವಿವರ.

- ಸಭೆಯ ಗಮನಕ್ಕೆ ತರಲಾಯಿತು.

II 1) ದಿನಾಂಕ 26.03.2016 ರಂದು ನಡೆದ ಶೈಕ್ಷಣಿಕ ಮಂಡಳಿಯ 2015-16ನೇ ಸಾಲಿನ ನಾಲ್ಕನೆಯ ಸಾಮಾನ್ಯ ಸಭೆಯ ನಡಾವಳಿಗಳ ದೃಢೀಕರಣ.

2) ದಿನಾಂಕ 29.03.2016ರಂದು ನಡೆದ ಶೈಕ್ಷಣಿಕ ಮಂಡಳಿಯ 2015-16ನೇ ಸಾಲಿನ ತೃತೀಯ ವಿಶೇಷ ಸಭೆಯ ನಡಾವಳಿಗಳ (ಘಟಿಕೋತ್ಸವ) ದೃಢೀಕರಣ.

- ದೃಢೀಕರಿಸಲಾಯಿತು.

III ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು:

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಶೈ.ಮ.ಸಾಸ.1:1(2016-17)

**ವಿಷಯ** : ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ 'ಬ್ರಹ್ಮಶ್ರೀ ನಾರಾಯಣ ಗುರು ಅಧ್ಯಯನ ಪೀಠ' ಸ್ಥಾಪಿಸುವ ಬಗ್ಗೆ ರಚಿಸಿದ ಕರಡು ಪರಿನಿಯಮವನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಶೈ.ಮ.ಸಾಸ.1:2(2016-17)

**ವಿಷಯ** : ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ 'ರಾಣಿ ಅಬ್ಬಕ್ಕ ಅಧ್ಯಯನ ಪೀಠ' ಸ್ಥಾಪನೆ ಬಗ್ಗೆ ರಚಿಸಿದ ಕರಡು ಪರಿನಿಯಮವನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಸದರಿ ಪೀಠದ ಸಲಹಾ ಸಮಿತಿ ಸಭೆಯನ್ನು ವರ್ಷದಲ್ಲಿ ಎರಡು ಬಾರಿ ನಡೆಸುವಂತೆ ಪರಿನಿಯಮದಲ್ಲಿ ತಿದ್ದುಪಡಿ ಮಾಡಲು ಸೂಚಿಸಿ ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಶೈ.ಮ.ಸಾಸ.1:3(2016-17)

**ವಿಷಯ** : ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ 'ಕೊಂಕಣಿ ಅಧ್ಯಯನ ಪೀಠ' ಸ್ಥಾಪನೆ ಬಗ್ಗೆ ರಚಿಸಿದ ಕರಡು ಪರಿನಿಯಮವನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಸದರಿ ಪೀಠದ ಸಲಹಾ ಸಮಿತಿ ಸಭೆಯನ್ನು ವರ್ಷದಲ್ಲಿ ಎರಡು ಬಾರಿ ನಡೆಸುವಂತೆ ಪರಿನಿಯಮದಲ್ಲಿ ತಿದ್ದುಪಡಿ ಮಾಡಲು ಸೂಚಿಸಿ ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ ಶೈ.ಮ.ಸಾಸ.1:4(2016-17)

**ವಿಷಯ** : ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಕ್ರೀಡಾ ನೀತಿ ಅನುಷ್ಠಾನಗೊಳಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ ಶೈ.ಸಾ.ಸ.1:5(2016-17)

**ವಿಷಯ** : ದೈಹಿಕ ಶಿಕ್ಷಣ ವಿಭಾಗದ ಕ್ರೀಡಾ ಮಾರ್ಗದರ್ಶಿ (Sports Guidelines) ಯನ್ನು ತಯಾರಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು ಶೈ.ಸಾ.ಸ.1:6(2016-17)

**ವಿಷಯ** : ಶೈಕ್ಷಣಿಕ ಮಂಡಳಿ ಸಮಿತಿಯನ್ನು ರಚಿಸುವ ಬಗ್ಗೆ.

**ನಿರ್ಣಯ: ಸಮಿತಿ ರಚಿಸುವ ಬಗ್ಗೆ ಮಾನ್ಯ ಕುಲಪತಿಯವರಿಗೆ ಅಧಿಕಾರ** ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಶೈ.ಸಾ.ಸ.1:7(2016-17)

**ವಿಷಯ** : ಭೂಗೋಳಶಾಸ್ತ್ರ ಪಿಹೆಚ್.ಡಿ. ಪದವಿಯ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿಶೈ.ಸಾ.ಸ.1:8(2016-17)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದ ಎರಡು ವರ್ಷಗಳ (ನಾಲ್ಕು ಸೆಮಿಸ್ಟರುಗಳು) ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳಿಗೆ ಯುಜಿಸಿ ಮಾರ್ಗಸೂಚಿ ಪ್ರಕಾರ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯಲ್ಲಿ ರಚಿಸಲಾದ ವಿನಿಯಮಗಳ ಬಗ್ಗೆ.

**ನಿರ್ಣಯ:** ವಿನಿಯಮವನ್ನು ಅನುಮೋದಿಸಲಾಯಿತು. ದಿನಾಂಕ 13.07.2016ರಂದು ನಡೆದ ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಶಿಫಾರಸ್ಸುಗಳಲ್ಲಿ ಪ್ರಾಯೋಗಿಕ ವಿಷಯಗಳಿಗೆ ಎರಡು ಕ್ರೆಡಿಟ್‌ಗಳನ್ನು ನಿಗದಿಪಡಿಸುವ ಶಿಫಾರಸ್ಸನ್ನು ಅನುಮೋದಿಸಲಾಯಿತು. ಆದರೆ ಸೆಮಿನಾರ್ ಆಂತರಿಕ ಮೌಲ್ಯಮಾಪನದ ಒಂದು ಭಾಗವಾದುದರಿಂದ ಸೆಮಿನಾರ್‌ಗೆ ಒಂದು ಕ್ರೆಡಿಟ್‌ನ್ನು ನಿಗಡಿಪಡಿಸುವ ಶಿಫಾರಸ್ಸನ್ನು ಕೈಬಿಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ ಶೈ.ಸಾ.ಸ.1:9(2016-17)

**ವಿಷಯ :** ಬಿ.ಕಾಂ. ಪದವಿ ಹಾಗೂ ಬಿ. ಕಾಂ. ಪದವಿಯ ಟ್ಯಾಕ್ಸ್ ಪ್ರೊಸೀಜರ್ ವೊಕೇಶನಲ್ ವಿಷಯದ ಕೆಲವೊಂದು ಪತ್ರಿಕೆಗಳ ಪಠ್ಯಕ್ರಮದಲ್ಲಿ ಮಾಡಲಾದ ಬದಲಾವಣೆಗಳಿಗೆ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಶೈ.ಸಾ.ಸ.1:10(2016-17)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಯಲದ ಸ್ನಾತಕೋತ್ತರ ಆನ್ವಯಿಕ ಪ್ರಾಣಿಶಾಸ್ತ್ರ ಪದವಿ ಪರೀಕ್ಷೆ (I-IV ಸೆಮಿಸ್ಟರ್‌ಗಳನ್ನು ಸೇರಿಸಿ) ಯಲ್ಲಿ ಅತೀ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿ/ನಿಗೆ ಚಿನ್ನದ ಪದಕ ನೀಡಲು ಪ್ರೊ. ಕೆ. ಕೆ. ವಿಜಯಲಕ್ಷ್ಮಿ ಮೆಮೋರಿಯಲ್ ಚಿನ್ನದ ಪದಕ ದತ್ತಿನಿಧಿ ಸ್ಥಾಪಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ ಶೈ.ಸಾ.ಸ.1:11(2016-17)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ನೆಹರೂ ಚಿಂತನಾ ಕೇಂದ್ರ ಸ್ಥಾಪನೆ ಬಗ್ಗೆ ರಚಿಸಿದ ಕರಡು ಪರಿನಿಯಮವನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಕರಡು ಪರಿನಿಯಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು ಶೈ.ಸಾ.ಸ.1:12(2016-17)

**ವಿಷಯ :** ಡಾ. ಬಾಲಕೃಷ್ಣ ಕಲ್ಲೂರಾಯ, ಪ್ರಾಧ್ಯಾಪಕರು, ಸ್ನಾತಕೋತ್ತರ ರಸಾಯನಶಾಸ್ತ್ರ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ಶೈಕ್ಷಣಿಕ ಮಂಡಳಿ ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ.

**ನಿರ್ಣಯ:** ಅನುಮೋದಿಸಲಾಯಿತು. ಸಮ್ಮರ್ ಫೆಲೋಶಿಪ್‌ಗಾಗಿ ಸೂಕ್ತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲು ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಡೀನರನ್ನು ಅಧ್ಯಕ್ಷರನ್ನಾಗಿ, ಡಾ. ಬಾಲಕೃಷ್ಣ ಕಲ್ಲೂರಾಯ ಇವರನ್ನು ಸಂಚಾಲಕರನ್ನಾಗಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗಗಳ ಆಧ್ಯಾಪಕರುಗಳನ್ನು ಸದಸ್ಯರನ್ನಾಗಿ ಒಳಗೊಂಡ ಸಮಿತಿಯನ್ನು ರಚಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹವಿ ಶೈ.ಸಾ.ಸ.1:13(2016-17)

**ವಿಷಯ :** 2015-16ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಅನುಮೋದನೆಯ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ ಶೈ.ಸಾ.ಸ.1.14 (2016-17)**

**ವಿಷಯ :** **ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಆನ್ವಯಿಕ ಪ್ರಾಣಿಶಾಸ್ತ್ರ ಮತ್ತು ಆನ್ವಯಿಕ ಸಸ್ಯಶಾಸ್ತ್ರ ವಿಭಾಗಗಳಲ್ಲಿ ಶೈಕ್ಷಣಿಕ ವರ್ಷ 2016-17ನೇ ಸಾಲಿನಿಂದ ಕ್ರಮವಾಗಿ ಎಂ. ಎಸ್ಸಿ. ಪ್ರಾಣಿಶಾಸ್ತ್ರ ಮತ್ತು ಎಂ. ಎಸ್ಸಿ. ಸಸ್ಯಶಾಸ್ತ್ರ ಪದವಿಗಳನ್ನು ನಡೆಸುವ ಬಗ್ಗೆ.**

**ನಿರ್ಣಯ:** ಅನುಮೋದಿಸಲಾಯಿತು. ಈ ಬಗ್ಗೆ ಪತ್ರಿಕಾ ಪ್ರಕಟಣೆ ನೀಡುವಂತೆ ಸಂಬಂಧಪಟ್ಟ ಅಧ್ಯಯನ ಮಂಡಳಿಯ ಅಧ್ಯಕ್ಷರಿಗೆ ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** **ಎಸಿಸಿ ಶೈ.ಸಾ.ಸ.1.15 (2016-17)**

**ವಿಷಯ : ಪಿ. ಜಿ. ಡಿಪ್ಲೋಮಾ ಇನ್ ಯೋಗಿಕ್ ಸೈನ್ಸ್‌ನ ಪ್ರವೇಶಾರ್ಹತೆ ತಿದ್ದುಪಡಿ ಬಗ್ಗೆ.**

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.16 (2016-17)**

**ವಿಷಯ : ಶೈಕ್ಷಣಿಕ ವರ್ಷ 2016-17ನೇ ಸಾಲಿನಿಂದ ಸಿಲಿಕಾನ್ ಕಾಲೇಜ್ ಆಫ್ ಅಡ್ವಾನ್ಸ್‌ಡ್ ಸ್ಟಡೀಸ್, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಸಂಯೋಜನೆ ಬಗ್ಗೆ.**

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.17 (2016-17)**

**ವಿಷಯ :** ಶೈಕ್ಷಣಿಕ ವರ್ಷ 2016–17ನೇ ಸಾಲಿನಿಂದ ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಡಿಸೈನ್, ಮಂಗಳೂರು ಎಂಬ ವಿದ್ಯಾಸಂಸ್ಥೆಯ ಸಂಯೋಜನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.18 (2016-17)**

**ವಿಷಯ :** ಶೈಕ್ಷಣಿಕ ವರ್ಷ 2016–17ನೇ ಸಾಲಿಗೆ ಮಂಗಳೂರು ಇನ್‌ಸ್ಟಿಟ್ಯೂಟ್ ಆಫ್ ಫ್ಯಾಷನ್ ಟೆಕ್ನಾಲಜಿ ಎಂಬ ವಿದ್ಯಾಸಂಸ್ಥೆಗೆ ಹೆಚ್ಚುವರಿ ವಿದ್ಯಾರ್ಥಿ ಪರಿಮಿತಿಗೆ ಅನುಮತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.19 (2016-17)**

**ವಿಷಯ :** ಆಳ್ವಾಸ್ ಕಾಲೇಜ್ ಆಫ್ ಫಿಸಿಕಲ್ ಎಜ್ಯುಕೇಶನ್, ಮೂಡಬಿದಿರೆ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2016–17ನೇ ಸಾಲಿಗೆ ಎಂ.ಪಿ.ಎಡ್. ಕೋರ್ಸಿನ ಸಂಯೋಜನಾ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಕೂಲಂಕುಷವಾಗಿ ಪರಿಶೀಲಿಸಿ ಸದರಿ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2016-17ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿದ ವರದಿಯನ್ನು ಅಂಗೀಕರಿಸಿ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.20 (2016-17)**

**ವಿಷಯ :** ಆಳ್ವಾಸ್ ಕಾಲೇಜ್ ಆಫ್ ಎಜ್ಯುಕೇಶನ್, ಮೂಡಬಿದಿರೆ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2016–17ನೇ ಸಾಲಿಗೆ ಎಂ.ಎಡ್. ಕೋರ್ಸಿಗೆ ವಿಸ್ತರಣಾ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಕೂಲಂಕುಷವಾಗಿ ಪರಿಶೀಲಿಸಿ ಸದರಿ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2016-17ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿದ ವರದಿಯನ್ನು ಅಂಗೀಕರಿಸಿ ವಿಸ್ತರಣಾ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.21 (2016-17)**

**ವಿಷಯ :** ಸರಕಾರಿ ಪ್ರಥಮ ದರ್ಜೆ ಕಾಲೇಜು, ಬೆಳ್ತಂಗಡಿ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2016–17ನೇ ಸಾಲಿಗೆ ವಿಸ್ತರಣಾ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ಎಂ.ಎ. ಕನ್ನಡ ಕೋರ್ಸಿಗೆ ಮಾತ್ರ ಶಿಫಾರಸ್ಸು ಮಾಡಿದ್ದು, ಎಂ.ಎಂ. ರಾಜ್ಯಶಾಸ್ತ್ರ ಕೋರ್ಸಿಗೆ ಶಿಫಾರಸ್ಸು ಮಾಡಿರದ ಕಾರಣ ಈ ಬಗ್ಗೆ ಸರಕಾರಿ ಆದೇಶವು ಸ್ವೀಕೃತಿಯಾಗಿರುವ ಹಿನ್ನೆಲೆಯಲ್ಲಿ ಸಂಸ್ಥೆಗೆ ಕಲಾ ನಿಕಾಯದ ಡೀನರು ಹಾಗೂ ರಾಜ್ಯಶಾಸ್ತ್ರದ ಪ್ರಾಧ್ಯಾಪಕರನ್ನೊಳಗೊಂಡ ಸಮಿತಿಯನ್ನು ಮರುಪರಿಶೀಲನೆ ನಡೆಸಲು ಕಳುಹಿಸಿ ಸಲ್ಲಿಸುವ ವರದಿಯ ಆಧಾರದ ಮೇರೆಗೆ ವಿಸ್ತರಣಾ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.22 (2016-17)**

**ವಿಷಯ** : ಸರಕಾರಿ ಪ್ರಥಮ ದರ್ಜೆ ಕಾಲೇಜು, ಮುನಿಯಾಲು, ಕಾರ್ಕಳ ಎಂಬ ವಿದ್ಯಾ ಸಂಸ್ಥೆಗೆ ಶೈಕ್ಷಣಿಕ ವರ್ಷ 2016–17ನೇ ಸಾಲಿಗೆ ವಿಸ್ತರಣಾ ಸಂಯೋಜನಾ ಮಂಜೂರಾತಿ ಬಗ್ಗೆ.

**ನಿರ್ಣಯ:** ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಕೂಲಂಕುಷವಾಗಿ ಪರಿಶೀಲಿಸಿ ಸದರಿ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇರೆಗೆ ಶೈಕ್ಷಣಿಕ ವರ್ಷ 2016-17ನೇ ಸಾಲಿಗೆ ಶಿಫಾರಸ್ಸು ಮಾಡಿರುವ ವಿದ್ಯಾರ್ಥಿ ಪರಿಮಿತಿಯೊಂದಿಗೆ ಸಲ್ಲಿಸಿದ ವರದಿಯನ್ನು ಅಂಗೀಕರಿಸಿ ವಿಸ್ತರಣಾ ಸಂಯೋಜನೆ ನೀಡಬಹುದೆಂಬುದಾಗಿ ಸಿಂಡಿಕೇಟಿಗೆ ಶಿಫಾರಸ್ಸು ಮಾಡಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.23 (2016-17)**

**ವಿಷಯ** : ಗೌರವ ಡಾಕ್ಟರೇಟ್ ಪದವಿ ಪ್ರದಾನಕ್ಕೆ ಸಂಬಂಧಿಸಿದಂತೆ ಪರಿನಿಯಮದ ತಿದ್ದುಪಡಿ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.24 (2016-17)**

**ವಿಷಯ** : ಎರಡು ವರ್ಷಗಳ ಬಿ. ಇಡಿ. ಪದವಿಯ ದ್ವಿತೀಯ ಸೆಮಿಸ್ಟರಿನ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.25 (2016-17)**

**ವಿಷಯ** : ಶಿಕ್ಷಣ ನಿಕಾಯದಡಿ ಬರುವ ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳಿಗೆ ಯುಜಿಸಿ ಮಾರ್ಗಸೂಚಿ ಆಧಾರಿತ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ವಿನಿಯಮದ ಪ್ರಕಾರ ಪರಿಷ್ಕರಿಸಲಾದ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಶಿಕ್ಷಣ ನಿಕಾಯದಡಿ ಬರುವ ಸ್ನಾತಕೋತ್ತರ ಕಾರ್ಯಕ್ರಮಗಳ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.26 (2016-17)**

**ವಿಷಯ** : ವಾಣಿಜ್ಯ ನಿಕಾಯದಡಿ ಬರುವ ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳಿಗೆ ಯುಜಿಸಿ ಮಾರ್ಗಸೂಚಿ ಆಧಾರಿತ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ವಿನಿಯಮದ ಪ್ರಕಾರ ಪರಿಷ್ಕರಿಸಲಾದ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ವಾಣಿಜ್ಯ ನಿಕಾಯದಡಿ ಬರುವ ಸ್ನಾತಕೋತ್ತರ ಕಾರ್ಯಕ್ರಮಗಳ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.27 (2016-17)**

**ವಿಷಯ** : ರೇಡಿಯೋ ಥೆರಪಿ ಟೆಕ್ನಾಲಜಿ ಡಿಪ್ಲೋಮಾ ಕಾರ್ಯಕ್ರಮವನ್ನು ನಿಯಂತ್ರಿಸುವ ವಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.28 (2016-17)**

**ವಿಷಯ** : ಎಂ. ಎ. ಕೊಂಕಣಿ ಪದವಿಗೆ ನಿಗದಿಪಡಿಸಿದ ಪ್ರವೇಶಾರ್ಹತೆ ಮತ್ತು ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.29 (2016-17)**

**ವಿಷಯ** : ಕಲಾ ನಿಕಾಯದ ವ್ಯಾಪ್ತಿಯಡಿ ಬರುವ ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳಿಗೆ ಯುಜಿಸಿ ಮಾರ್ಗಸೂಚಿ ಆಧಾರಿತ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ವಿನಿಯಮದ ಪ್ರಕಾರ ಪರಿಷ್ಕರಿಸಲಾದ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಕಲಾ ನಿಕಾಯದಡಿ ಬರುವ ಸ್ನಾತಕೋತ್ತರ ಕಾರ್ಯಕ್ರಮಗಳ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು. ಎಂ.ಎಸ್.ಡಬ್ಲ್ಯು. ಪಠ್ಯ ಕ್ರಮಕ್ಕೆ ಸಂಬಂಧಿಸಿದಂತೆ ಶೈಕ್ಷಣಿಕ ಮಂಡಳಿ ಸದಸ್ಯರೊಬ್ಬರು ನೀಡಿರುವ ಸಲಹೆಯನ್ನು ಕಲಾ ನಿಕಾಯದ ಡೀನರೊಂದಿಗೆ ಚರ್ಚಿಸಿ ಅಗತ್ಯವಿರುವ ಕ್ರಮವನ್ನು ಕೈಗೊಳ್ಳಲು ಅಧ್ಯಯನ ಮಂಡಳಿಯ ಅಧ್ಯಕ್ಷರಿಗೆ ಸೂಚಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.30 (2016-17)**

**ವಿಷಯ** : ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ವ್ಯಾಪ್ತಿಯಡಿ ಬರುವ ಸ್ನಾತಕೋತ್ತರ ಪದವಿ ಕಾರ್ಯಕ್ರಮಗಳಿಗೆ ಯುಜಿಸಿ ಮಾರ್ಗಸೂಚಿ ಆಧಾರಿತ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ವಿನಿಯಮದ ಪ್ರಕಾರ ಪರಿಷ್ಕರಿಸಲಾದ ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದಡಿ ಬರುವ ಸ್ನಾತಕೋತ್ತರ ಕಾರ್ಯಕ್ರಮಗಳ ಪಠ್ಯಕ್ರಮಗಳನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ: ಎಸಿಸಿ ಶೈ.ಸಾ.ಸ.1.31 (2016-17)**

**ವಿಷಯ:** ಸೈಬರ್ ಸೆಕ್ಯೂರಿಟಿ ಸ್ನಾತಕೋತ್ತರ ಡಿಪ್ಲೋಮಾ ಕಾರ್ಯಕ್ರಮವನ್ನು ನಿಯಂತ್ರಿಸುವ ವಿನಿಯಮ ಮತ್ತು ಪಠ್ಯಕ್ರಮದ ರೂಪುರೇಷೆಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಮಾನ್ಯ ಕುಲಪತಿಯವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಕುಲಸಚಿವರು

ಕುಲಪತಿಗಳು

## ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 01.02.2019 ರಂದು ಪೂರ್ವಾಹ್ನ ಗಂಟೆ 10:30ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಸೌಧದ ಹೊಸ ಸೆನೆಟ್ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2018–19ನೇ ಸಾಲಿನ ತೃತೀಯ ಸಾಮಾನ್ಯ ಸಭೆಯ ನಡಾವಳಿಗಳು.**

**ಉಪಸ್ಥಿತ ಸದಸ್ಯರು:**

**ಅನುಪಸ್ಥಿತ ಸದಸ್ಯರು**

### ಪ್ರಾರಂಭಿಕ

ಮಾನ್ಯ ಕುಲಪತಿಯವರು ಎಲ್ಲಾ ಸದಸ್ಯರನ್ನು ಹಾಗೂ ಮಾಧ್ಯಮ ಪ್ರತಿನಿಧಿಗಳನ್ನು ಸಭೆಗೆ ಸ್ವಾಗತಿಸಿದರು.

### ಸ್ವಾಗತ

ಘನತೆವೆತ್ತ ರಾಜ್ಯಪಾಲರು **ಪ್ರೊ. ಈಶ್ವರ ಪಿ.,** ಡೀನ್, ವಾಣಿಜ್ಯ ನಿಕಾಯ ಇವರನ್ನು ಕರ್ನಾಟಕ ವಿಶ್ವವಿದ್ಯಾನಿಲಯಗಳ ಅಧಿನಿಯಮ ಸೆಕ್ಷನ್ 16(2)ರನ್ವಯ ಪತ್ರ ಸಂ. ಜಿಎಸ್. 01 ಎಂಎಲ್ಎಂ 2018 ದಿನಾಂಕ 03.11.2018 ರಲ್ಲಿ ದಿನಾಂಕ 07.11.2018 ರಿಂದ ಮಂಗಳೂರು ವಿಶ್ವವಿದ್ಯಾನಿಲಯದ ಪ್ರಭಾರ ಕುಲಪತಿಯವರನ್ನಾಗಿ ನೇಮಕ ಮಾಡಿರುತ್ತಾರೆ. ಇವರನ್ನು ಕುಲಸಚಿವರು ಶೈಕ್ಷಣಿಕ ಮಂಡಳಿ ಸಭೆಗೆ ಪರಿಚಯಿಸಿ ಸ್ವಾಗತಿಸಿದರು.

ಮಾನ್ಯ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಯಲ್ಲಿ ಭಾಗವಹಿಸಲು ಪ್ರತ್ಯಾಯೋಜಿಸಲಾಗಿರುವ ಮಂಗಳೂರು ಪ್ರಾದೇಶಿಕ ಕಛೇರಿಯ ನೂತನ ಪ್ರಭಾರ ಜಂಟಿ ನಿರ್ದೇಶಕರಾದ **ಡಾ. ಅಪ್ಪಾಜಿ ಗೌಡ ಎಸ್.ಬಿ.** ಇವರನ್ನು, ಮಂಗಳೂರು ವಿಶ್ವವಿದ್ಯಾನಿಲಯದ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿಯ ನಿರ್ದೇಶಕರ ಹುದ್ದೆಯ ಪ್ರಭಾರವನ್ನು ವಹಿಸಿಕೊಂಡಿರುವ **ಪ್ರೊ. ಕೆ. ಎಸ್. ಜಯಪ್ಪ,** ಪ್ರಾಧ್ಯಾಪಕರು, ಸ್ನಾತಕೋತ್ತರ ಸಾಗರ ಭೂ ವಿಜ್ಞಾನ ಅಧ್ಯಯನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರನ್ನು ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1)(vi)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ಮೇರೆಗೆ ಮಾನ್ಯ ಕುಲಪತಿಯವರಿಂದ ನಾಮನಿರ್ದೇಶನಗೊಂಡಿರುವ;

**ಡಾ. ಯು. ತಾರಾ ರಾವ್,** ಪ್ರಾಂಶುಪಾಲರು, ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಕಾವೂರು, ಮಂಗಳೂರು ಹಾಗೂ **ಶ್ರೀ ವಸಂತರಾಜ್ ಶೆಟ್ಟಿ ಕೆ.,** ಪ್ರಾಂಶುಪಾಲರು, ಶ್ರೀಮತಿ ರುಕ್ಮಿಣಿ ಶೇಡ್ತಿ ರಾಷ್ಟ್ರೀಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಬಾರ್ಕೂರು ಇವರುಗಳನ್ನು ಮತ್ತು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ದ ಪ್ರಕರಣ 30(1)(x)ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ವಿದ್ಯಾರ್ಥಿ ಪ್ರತಿನಿಧಿಗಳಾಗಿ ಮಾನ್ಯ ಕುಲಪತಿಯವರಿಂದ ನಾಮನಿರ್ದೇಶನಗೊಂಡಿರುವ;

**ಕು. ಚೋಂದಮ್ಮ ಎಂ.ಬಿ.,** ತೃತೀಯ ಬಿ.ಎಸ್ಸಿ. ಕಾವೇರಿ ಕಾಲೇಜು, ಗೋಣಿಕೊಪ್ಪಲು, **ಶ್ರೀ ಲಾರೆನ್ಸ್ ಮೊಂತೆರೋ,** ತೃತೀಯ ಬಿ.ಕಾಂ. ಕಾವೇರಿ ಕಾಲೇಜು, ಗೋಣಿಕೊಪ್ಪಲು, **ಶ್ರೀ ಕಿರಣ್ ಪಿ.ಎಂ.** ತೃತೀಯ ಬಿ.ಕಾಂ. ಕಾವೇರಿ ಕಾಲೇಜು, ವಿರಾಜಪೇಟೆ **ಕು. ದೀಕ್ಷಿತಾ,** ದ್ವಿತೀಯ ಎಂ.ಎಸ್ಸಿ. ಗಣಿತಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಮತ್ತು **ಕು. ನೇಹಾ ರೌಣಿಯಾರ್,** ದ್ವಿತೀಯ ಎಂ.ಬಿ.ಎ., ವ್ಯವಹಾರ ಆಡಳಿತ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ ಇವರುಗಳನ್ನು ಮಾನ್ಯ ಕುಲಪತಿಯವರು ಶೈಕ್ಷಣಿಕ ಮಂಡಳಿ ಸಭೆಗೆ ಪರಿಚಯಿಸಿ ಸ್ವಾಗತಿಸಿದರು.

### ಕೃತಜ್ಞತೆ

ಘನತೆವೆತ್ತ ರಾಜ್ಯಪಾಲರಿಂದ ಕರ್ನಾಟಕ ವಿಶ್ವವಿದ್ಯಾನಿಲಯಗಳ ಅಧಿನಿಯಮ ಸೆಕ್ಷನ್ 16(2)ರನ್ವಯ ಪತ್ರ ಸಂ. ಜಿಎಸ್ 01 ಎಂಎಲ್ಎಂ 2018, ದಿನಾಂಕ 04.06.2018 ರಂತೆ ಮಂಗಳೂರು ವಿಶ್ವವಿದ್ಯಾನಿಲಯದ ಪ್ರಭಾರ ಕುಲಪತಿಗಳಾಗಿ ನೇಮಕಗೊಂಡಿದ್ದ ಶಿಕ್ಷಣ ನಿಕಾಯದ ಡೀನ್ **ಡಾ. ಕಿಶೋರ್ ಕುಮಾರ್ ಸಿ.ಕೆ.** ಇವರ ಸೇವಾವಧಿ ದಿನಾಂಕ 06.11.2018ಕ್ಕೆ ಅಂತ್ಯಗೊಂಡಿದೆ. ಇವರು ಪ್ರಭಾರ ಕುಲಪತಿಗಳಾಗಿ ಹಾಗೂ ಶೈಕ್ಷಣಿಕ ಮಂಡಳಿಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಿದ್ದಕ್ಕಾಗಿ ಶೈಕ್ಷಣಿಕ ಮಂಡಳಿಯ ವತಿಯಿಂದ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

ಮಾನ್ಯ ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಇವರ ಪರವಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಯ ಸಭೆಗಳಲ್ಲಿ ಭಾಗವಹಿಸಲು ಪ್ರತ್ಯಾಯೋಜಿಸಲಾಗಿದ್ದ **ಶ್ರೀ ಮಹೇಶ್ ರಾವ್,** ಜಂಟಿ ನಿರ್ದೇಶಕರು (ಪ್ರಭಾರ), ಕಾಲೇಜು ಶಿಕ್ಷಣ ಇಲಾಖೆ ಇವರು ದಿನಾಂಕ 31.10.2018 ರಂದು ವಯೋನಿವೃತ್ತರಾಗಿದ್ದಾರೆ ಹಾಗೂ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 30(1) (vi) ರ ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರ ಜೇಷ್ಠತೆ ಹಾಗೂ ಸರದಿಯ ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಗೆ ಸದಸ್ಯರಾಗಿ ಮಾನ್ಯ ಕುಲಪತಿಯವರಿಂದ ನಾಮ ನಿರ್ದೇಶನಗೊಂಡಿದ್ದ **ಡಾ. ಪಾರ್ವತಿ ಎ.ಎ.,** ಪ್ರಾಂಶುಪಾಲರು, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರು ದಿನಾಂಕ 31.10.2018 ರಂದು ವಯೋನಿವೃತ್ತರಾಗಿರುವುದರಿಂದ ಹಾಗೂ **ಡಾ. ಮಧುಸೂಧನ್ ಭಟ್,** ಪ್ರಾಂಶುಪಾಲರು, ಉಪೇಂದ್ರ ಪೈ ಮೆಮೋರಿಯಲ್ ಕಾಲೇಜು, ಕುಂಜಿಬೆಟ್ಟು, ಉಡುಪಿ ಇವರ ಸದಸ್ಯತ್ವದ ಅವಧಿಯು ಕೊನೆಗೊಂಡಿರುವುದರಿಂದ ಶೈಕ್ಷಣಿಕ ಮಂಡಳಿ ಸದಸ್ಯತ್ವದಿಂದ ಮುಕ್ತಗೊಳಿಸಲಾಗಿದೆ.

ಇವರುಗಳು ಶೈಕ್ಷಣಿಕ ಮಂಡಳಿಯ ಸಭೆಗಳಲ್ಲಿ ವಿಶ್ವವಿದ್ಯಾನಿಲಯದ ಸರ್ವತೋಮುಖ ಪ್ರಗತಿಗೆ ಹಾಗೂ ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕ ಸಲಹೆ ಮತ್ತು ಸಹಕಾರಗಳನ್ನು ನೀಡಿರುವುದಕ್ಕಾಗಿ ಇವರಿಗೆ ಶೈಕ್ಷಣಿಕ ಮಂಡಳಿ ಪರವಾಗಿ ಕೃತಜ್ಞತಾಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

**ಸಂತಾಪ**

ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಜೀವ ವಿಜ್ಞಾನ ವಿಭಾಗದಲ್ಲಿ ಪ್ರಾಧ್ಯಾಪಕರಾಗಿ ಹಾಗೂ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ ಪ್ರೊ. ಎಂ. ರಾಜಶೇಖರ್ ಇವರು ದಿನಾಂಕ 05.01.2019ರಂದು ದೈವಾಧೀನರಾಗಿರುತ್ತಾರೆ. ಸದರಿಯವರು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಅಧಿನಿಯಮ 2000ರ ಪ್ರಕಾರ 13.09.2004 ರಿಂದ 12.09.2006 ರವರೆಗೆ ಪ್ರಾಧ್ಯಾಪಕರ ನೆಲೆಯಲ್ಲಿ ಹಾಗೂ 01.02.2012 ರಿಂದ 31.01.2014 ರವರೆಗೆ ವಿಜ್ಞಾನ ಹಾಗೂ ತಂತ್ರಜ್ಞಾನ ನಿಕಾಯದ ಡೀನ್ ನೆಲೆಯಲ್ಲಿ ಮಂಗಳೂರು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸದಸ್ಯರಾಗಿ ಸೇವೆ ಸಲ್ಲಿಸಿರುತ್ತಾರೆ.

ಅಲ್ಲದೆ ಇವರು ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಸದಸ್ಯರಾಗಿ, ವಿಜ್ಞಾನ ಮತ್ತು ತಂತ್ರಜ್ಞಾನ ನಿಕಾಯದ ಡೀನ್‌ರಾಗಿ, ಕಾಲೇಜು ಅಭಿವೃದ್ಧಿ ಮಂಡಳಿ ನಿರ್ದೇಶಕರಾಗಿ, ವಿಶ್ವವಿದ್ಯಾನಿಲಯದ ವಿವಿಧ ಸಮಿತಿಗಳಲ್ಲಿ ಸಕ್ರಿಯವಾಗಿ ಕಾರ್ಯನಿರ್ವಹಿಸಿ ಶೈಕ್ಷಣಿಕ ಬೆಳವಣಿಗೆಗೆ ಅಪಾರ ಕೊಡುಗೆ ನೀಡಿರುತ್ತಾರೆ. ಇವರ ನಿಧನಕ್ಕೆ ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿ ಸಭೆಯು ಸಂತಾಪವನ್ನು ವ್ಯಕ್ತಪಡಿಸುತ್ತಾ, ಅಗಲಿದ ದಿವ್ಯಾತ್ಮಕ್ಕೆ ಪರಮಾತ್ಮನು ಚಿರಶಾಂತಿಯನ್ನು ನೀಡಲೆಂದೂ ಹಾಗೂ ಅವರ ಅಗಲಿಕೆಯ ದುಃಖವನ್ನು ಸಹಿಸಿಕೊಳ್ಳುವ ಶಕ್ತಿ ಅವರ ಕುಟುಂಬದವರಿಗೆ ಹಾಗೂ ಶಿಷ್ಯವರ್ಗಕ್ಕೆ ಪ್ರಾಪ್ತವಾಗಲಿ ಎಂದು ಕೋರುವ ಸಂತಾಪ ಸೂಚಕ ನಿರ್ಣಯವನ್ನು ಶೈಕ್ಷಣಿಕ ಮಂಡಳಿ ಸಭೆಯು ಅಂಗೀಕರಿಸಿ ಒಂದು ನಿಮಿಷ ಮೌನವನ್ನು ಆಚರಿಸುವ ಮೂಲಕ ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಲಾಯಿತು.

I ಘನತೆವೆತ್ತ ಕುಲಾಧಿಪತಿಗಳಿಂದ ಅನುಮೋದನೆ ಪಡೆಕೊಂಡ ಪರಿನಿಯಮಗಳು / ವಿನಿಯಮಗಳ ವಿವರ.

ಯಾವುದೂ ಇಲ್ಲ.

II ದಿನಾಂಕ 29.09.2018 ರಂದು ನಡೆದ ಶೈಕ್ಷಣಿಕ ಮಂಡಳಿಯ 2018–19ನೇ ಸಾಲಿನ ದ್ವಿತೀಯ ಸಾಮಾನ್ಯ ಸಭೆಯ ನಡಾವಳಿಗಳ ದೃಢೀಕರಣ.

– ದೃಢೀಕರಿಸಲಾಯಿತು. –

III **ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು.**

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಶೈ.ಸಾ.ಸ.3:01(2018–19)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪ್ರೊ. ಜೋಗನ್ ಶಂಕರ್ ಇವರ ಗೌರವಾರ್ಥ ಚಿನ್ನದ ಪದಕ ದತ್ತಿನಿಧಿ ಸ್ಥಾಪನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಶೈ.ಸಾ.ಸ.3:02(2018–19)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "International Conference on Recent Advances in Materials Science and Biophysics 2018 ಗೌರವಾರ್ಥ ದತ್ತಿ ಉಪನ್ಯಾಸ ನಿಧಿ" ಸ್ಥಾಪಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಶೈ.ಸಾ.ಸ.3:03(2018–19)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "International Conference on Recent Advances in Materials Science and Biophysics 2018" ಹೆಸರಿನಲ್ಲಿ ಚಿನ್ನದ ಪದಕ ದತ್ತಿನಿಧಿ ಸ್ಥಾಪನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:04(2018–19)

**ವಿಷಯ :** ಸಂತ ಅಲೋಶಿಯಸ್ ಕಾಲೇಜು, ಮಂಗಳೂರು ಇಲ್ಲಿ ಶೈಕ್ಷಣಿಕ ವರ್ಷ 2018–19ನೇ ಸಾಲಿಗೆ ಪದವಿ ಕೋರ್ಸ್‌ಗಳಿಗೆ ಸ್ವಾಯತ್ತ ಸ್ಥಾನಮಾನ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:05(2018–19)

**ವಿಷಯ :** Massive Open Online ಕೋರ್ಸುಗಳ ಅನುಮೋದನೆ ಬಗ್ಗೆ.

**ನಿರ್ಣಯ:** M.Sc. Food Science & Nutrition, /B.Sc. F.ND., /M.Sc. Food Science & Technology, /B.Sc. (Food Technology), /M.Sc. Biotechnology, /B.Sc. Biotechnology (Optional Subjects) ಕೋರ್ಸ್‌ಗಳಿಗೆ ಸಂಬಂಧಿಸಿದ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳು ಶಿಫಾರಸ್ಸು ಮಾಡಿರುವ ಪತ್ರಿಕೆಗಳನ್ನು Massive Open Online(MOOC) ಕೋರ್ಸುಗಳಾಗಿ ಆಳವಡಿಸಲು ತೀರ್ಮಾನಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:06(2018–19)

**ವಿಷಯ :** Massive Open Online ಕೋರ್ಸುಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಸ್ನಾತಕೋತ್ತರ ವ್ಯವಹಾರ ಆಡಳಿತ (MBA), ಪದವಿ ಮತ್ತು ಸ್ನಾತಕೋತ್ತರ ಟ್ರಾವೆಲ್ ಆ್ಯಂಡ್ ಟೂರಿಸಂ ಮ್ಯಾನೇಜ್‌ಮೆಂಟ್, ಹಾಸ್ಪಿಟಾಲಿಟಿ ಮ್ಯಾನೇಜ್‌ಮೆಂಟ್ ಹಾಗೂ ಪಿ.ಜಿ.ಡಿ.ಟಿ.ಹೆಚ್.ಎಂ. ಕೋರ್ಸ್‌ಗಳಿಗೆ ಸಂಬಂಧಿಸಿದ ಅಧ್ಯಯನ ಮಂಡಳಿಗಳ ಅಧ್ಯಕ್ಷರುಗಳು ಶಿಫಾರಸ್ಸು ಮಾಡಿರುವ ಪತ್ರಿಕೆಗಳನ್ನು Massive Open Online(MOOC) ಕೋರ್ಸುಗಳಾಗಿ ಆಳವಡಿಸಲು ತೀರ್ಮಾನಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:07(2018–19)

**ವಿಷಯ :** ಎಂ.ಕಾಂ. (ಹೆಚ್.ಆರ್.ಡಿ.) ಪದವಿಯ ಪರೀಕ್ಷಾ ಕಾರ್ಯ ಯೋಜನೆ ತಿದ್ದುಪಡಿ ಅನುಮೋದನೆ ಬಗ್ಗೆ.

**ನಿರ್ಣಯ:** ಕ್ರೆಡಿಟ್‌ಗಳಲ್ಲಿ ವ್ಯತ್ಯಾಸಗಳಿರುವುದರಿಂದ ತಿದ್ದುಪಡಿಯನ್ನು ಸೂಚಿಸಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:08(2018–19)

**ವಿಷಯ :** ಎಂ.ಕಾಂ. ಪದವಿಯ ಪರಿಷ್ಕೃತ ಪಠ್ಯಕ್ರಮದ ಅನುಮೋದನೆ ಬಗ್ಗೆ

**ನಿರ್ಣಯ:** ಕ್ರೆಡಿಟ್‌ಗಳಲ್ಲಿ ವ್ಯತ್ಯಾಸಗಳಿರುವುದರಿಂದ ತಿದ್ದುಪಡಿಯನ್ನು ಸೂಚಿಸಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:09(2018–19)

**ವಿಷಯ :** ಪಿ.ಹೆಚ್.ಡಿ. ವಿನಿಮಯ 2018 ರ ಅನುಮೋದನೆ ಬಗ್ಗೆ.

**ನಿರ್ಣಯ:** ಪಿ.ಹೆಚ್.ಡಿ. ವಿನಿಮಯ 2018ನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:10(2018–19)

**ವಿಷಯ :** ಪಿ.ಹೆಚ್.ಡಿ. (ಯೋಗ ವಿಜ್ಞಾನ) ಪದವಿ ಕೋರ್ಸ್‌ವರ್ಕಿನ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:11(2018–19)

**ವಿಷಯ :** ಯೋಗ ವಿಜ್ಞಾನ ಪಿ.ಜಿ. ಡಿಪ್ಲೋಮಾ ಕಾರ್ಯಕ್ರಮದ ಪರಿಷ್ಕೃತ ವಿನಿಯಮ ಮತ್ತು ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಯೋಗ ವಿಜ್ಞಾನ ಪಿ.ಜಿ. ಡಿಪ್ಲೋಮಾ ಕೋರ್ಸಿನ ವಿನಿಮಯದಲ್ಲಿ Power to removal of Difficulties ಎಂಬ ಕಲಂನ್ನು ಸೇರ್ಪಡೆಗೊಳಿಸುವ ಷರತ್ತಿನೊಂದಿಗೆ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:12(2018–19)

**ವಿಷಯ :** ಯೋಗ ವಿಜ್ಞಾನ ಸರ್ಟಿಫಿಕೇಟ್ ಕೋರ್ಸಿನ ಪರಿಷ್ಕೃತ ವಿನಿಮಯ ಮತ್ತು ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಯೋಗ ವಿಜ್ಞಾನ ಸರ್ಟಿಫಿಕೇಟ್ ಕೋರ್ಸಿನ ವಿನಿಮಯದಲ್ಲಿ Power to removal of Difficulties ಸೇರ್ಪಡೆಗೊಳಿಸುವ ಷರತ್ತಿನೊಂದಿಗೆ ಅನುಮೋದಿಸಲಾಯಿತು

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:13(2018–19)

**ವಿಷಯ :** ಸರ್ಟಿಫಿಕೇಟ್ ಕೋರ್ಸ್‌ಗಳನ್ನು ಪ್ರಾರಂಭಿಸುವ ಮತ್ತು ಪಠ್ಯಕ್ರಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಪದವಿ ಮಟ್ಟದ ಸಸ್ಯಶಾಸ್ತ್ರ ಅಧ್ಯಯನ ಮಂಡಳಿ ಸಸ್ಯಶಾಸ್ತ್ರ ವಿಭಾಗದಲ್ಲಿ ಪ್ರಾರಂಭಿಸಲು ಪ್ರಸ್ತಾಪಿಸಿರುವ ಸರ್ಟಿಫಿಕೇಟ್ ಕೋರ್ಸ್‌ಗಳನ್ನು ಹಾಗೂ ಪಠ್ಯಕ್ರಮವನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:14(2018–19)

**ವಿಷಯ :** ಪದವಿ ಮಟ್ಟದ ಕಾರ್ಯಕ್ರಮಗಳಿಗೆ ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯಲ್ಲಿ ರಚಿಸಲಾದ ವಿನಿಮಯದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:15(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಭಾರತ ಸಂವಿಧಾನ, ಮಾನವ ಹಕ್ಕುಗಳು ಮತ್ತು ಪರಿಸರ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:16(2018–19

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ರಾಜ್ಯಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಕೆಲವೊಂದು ತಿದ್ದುಪಡಿಗಳನ್ನು ಸೂಚಿಸಿ ಮುಂದಿನ ಸಭೆಗೆ ಮಂಡಿಸಲು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:17(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಸಮಾಜಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:18(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಸಮಾಜ ಕಾರ್ಯ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:19(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಅರ್ಥಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:20(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಪತ್ರಿಕೋದ್ಯಮ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:21(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಪ್ರಾಚೀನ ಇತಿಹಾಸ ಮತ್ತು ಪುರಾತತ್ವ ಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:22(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಿ.ಎ. (ಹೆಚ್.ಆರ್.ಡಿ.) ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:23(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಇತಿಹಾಸ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:24(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಹಿಂದಿ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:25(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಕನ್ನಡ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:26(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಮೋಡರ್ನ್ ಯುರೋಪಿಯನ್ ಭಾಷಾ ವಿಷಯದ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:27(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಸಂಸ್ಕೃತ ಭಾಷಾ, ಐಚ್ಛಿಕ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:28(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಇಂಗ್ಲೀಷ್ ಭಾಷಾ, ಐಚ್ಛಿಕ ಮತ್ತು ಎಡಿಷನಲ್ ಇಂಗ್ಲೀಷ್ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:29(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಮಣಿಪುರಿ ಭಾಷಾ ವಿಷಯದ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:30(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಮಲಯಾಳಂ ಭಾಷಾ ವಿಷಯದ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:31(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಕೊಂಕಣಿ ಭಾಷಾ ವಿಷಯದ ಪಠ್ಯಕ್ರಮ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:32(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಸಸ್ಯಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:33(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಭೌತಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:34(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಸಂಖ್ಯಾಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:35(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಗಣಿತಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:36(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಭೂಗೋಳ ಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:37(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ರಸಾಯನ ಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:38(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಜೀವ ರಸಾಯನ ಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:39(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಮನಃಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:40(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಯೋಟೆಕ್ನಾಲಜಿ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:41(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಫುಡ್ ಟೆಕ್ನಾಲಜಿ ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:42(2018–19)
**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಿ.ಎಸ್ಸಿ.(ಎಫ್ಎನ್‌ಡಿ) ಪಠ್ಯಕ್ರಮದ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:43(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಿ.ಎಸ್ಸಿ. (ಫ್ಯಾಶನ್ ಡಿಸೈನ್) ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:44(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಇಂಟೀರಿಯರ್ ಡಿಸೈನ್ ಆಂಡ್ ಡೆಕೋರೇಷನ್ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:45(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಯೋಗ ವಿಜ್ಞಾನ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:46(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಹಾಸ್ಪಿಟಾಲಿಟಿ ಸಾಯನ್ಸ್ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:47(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ (ಬಿ.ಬಿ.ಎ.) ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:48(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಿಸಿನೆಸ್ ಮೆನೇಜ್‌ಮೆಂಟ್, ರೂರಲ್ ಡೆವಲಪ್‌ಮೆಂಟ್ ಮತ್ತು ಕೋಆಪರೇಷನ್ ವಿಷಯಗಳ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:49(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ವಾಣಿಜ್ಯ ಪಠ್ಯಕ್ರಮ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಶೈ.ಸಾ.ಸ.3:50(2018–19)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಪ್ರೊ. ಕೆ. ಭೈರಪ್ಪ, ವಿಶ್ರಾಂತ ಕುಲಪತಿಗಳು ಇವರ ಗೌರವಾರ್ಥ ದತ್ತಿ ಉಪನ್ಯಾಸ ನಿಧಿ ಮತ್ತು ಚಿನ್ನದ ಪದಕ ಪ್ರದಾನ ಮಾಡಲು ದತ್ತಿನಿಧಿ ಸ್ಥಾಪಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:51(2018–19)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ರ್‍ಯಾಂಕ್ ಘೋಷಣೆಯನ್ನು ನಿಯಂತ್ರಿಸುವ ವಿನಿಮಯಕ್ಕೆ ಸಂಬಂಧಿಸಿದಂತೆ ತಯಾರಿಸಿದ ಮಾರ್ಗಸೂಚಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:52(2018–19)

**ವಿಷಯ :** ಎಂ.ಎಸ್ಸಿ. ಸಾಗರ ಭೂ ವಿಜ್ಞಾನ ಪದವಿಯ ಪರಿಷ್ಕೃತ ಪರೀಕ್ಷಾ ಕಾರ್ಯಯೋಜನೆಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:53(2018–19)

**ವಿಷಯ :** ಎಂ.ಎಸ್ಸಿ. ಫುಡ್ ಸೈನ್ಸ್ ಆ್ಯಂಡ್ ಟೆಕ್ನಾಲಜಿ ಪದವಿಯ ಪ್ರವೇಶಾತಿ ವಿನಿಮಯದ ತಿದ್ದುಪಡಿಯ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:54(2018–19)

**ವಿಷಯ :** ವೃತ್ತಿ ಆಧಾರಿತ ಕಾರ್ಯಕ್ರಮದಡಿ ಪ್ರಾರಂಭಿಸಿರುವ Aviation and Hospitality Management ಕೋರ್ಸಿನ ಪ್ರಾಯೋಗಿಕ/ ಪ್ರಾಜೆಕ್ಟ್ ವರ್ಕಿನ ಪರಿಷ್ಕೃತ ಮಾರ್ಗಸೂಚಿ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:55(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಪ್ರಾಣಿಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:56(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಇಲೆಕ್ಟ್ರಾನಿಕ್ಸ್ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:57(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಸೆಕ್ರೆಟೇರಿಯಲ್ ಪ್ರಾಕ್ಟೀಸ್, ಆಫೀಸ್ ಪ್ರಾಕ್ಟೀಸ್ & ಮೆನೇಜ್‌ಮೆಂಟ್ ಮತ್ತು ಆಫೀಸ್ ಮೆನೇಜ್‌ಮೆಂಟ್ & ಸೆಕ್ರೆಟೇರಿಯಲ್ ಪ್ರಾಕ್ಟೀಸ್ (Voc) ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅಧ್ಯಯನ ಮಂಡಳಿ ಅಧ್ಯಕ್ಷರು ಡೀನ್‌ರವರೊಂದಿಗೆ ಚರ್ಚಿಸಿ Structure ನಲ್ಲಿ ತಿದ್ದುಪಡಿ ಮಾಡಬೇಕೆಂಬುವ ಷರತ್ತಿನೊಂದಿಗೆ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ: ಶೈ.ಸಾ.ಸ.3:58(2018–19)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ "ಪ್ರೊ. ಎ.ಕೆ. ಬರಡೋಲ್ ದತ್ತಿ ಉಪನ್ಯಾಸ ನಿಧಿ" ಸ್ಥಾಪಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:59(2018–19)

**ವಿಷಯ :** ಸ್ನಾತಕೋತ್ತರ ಹಿಂದಿ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:60(2018–19)

**ವಿಷಯ :** ವೃತ್ತಿ ಆಧಾರಿತ ಕಾರ್ಯಕ್ರಮದಡಿ ಪ್ರಾರಂಭಿಸಿರುವ ಟ್ರಾವೆಲ್ ಆ್ಯಂಡ್ ಟೂರಿಸಂನ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:61(2018–19)

**ವಿಷಯ :** ಸ್ನಾತಕೋತ್ತರ ಎಲ್.ಎಲ್.ಎಂ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಸ್ನಾತಕೋತ್ತರ ಎಲ್.ಎಲ್.ಎಂ ಪರಿನಿಯಮದಲ್ಲಿ Power to removal of Difficulties ಎಂಬ ಕಲಂನ್ನು ಸೇರ್ಪಡೆಗೊಳಿಸುವ ಷರತ್ತಿನೊಂದಿಗೆ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:62(2018–19)

**ವಿಷಯ :** ಎಂ.ಎಸ್ಸಿ. ಇಲೆಕ್ಟ್ರಾನಿಕ್ಸ್ ಪದವಿಯ ಪರಿಷ್ಕೃತ ಪಠ್ಯಕ್ರಮದಲ್ಲಿ ಹೊಸ ಪತ್ರಿಕೆಯನ್ನು ಅಳವಡಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:63(2018–19)

**ವಿಷಯ :** ಮಹಿಳಾ ಅಧ್ಯಯನ ಕೇಂದ್ರದ ವತಿಯಿಂದ ನಡೆಸಲ್ಪಡುವ 3 ಬಗೆಯ ಅಲ್ಪಾವಧಿ ತರಬೇತಿ ಕಾರ್ಯಕ್ರಮದ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಪ್ರಮಾಣ ಪತ್ರಗಳನ್ನು ಮಹಿಳಾ ಅಧ್ಯಯನ ಕೇಂದ್ರದ ವತಿಯಿಂದಲೇ ನೀಡುವ ಷರತ್ತಿನೊಂದಿಗೆ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:64(2018–19)

**ವಿಷಯ :** ಮಹಿಳಾ ಅಧ್ಯಯನ ವಿಷಯದ ಆಯ್ಕೆ ಪತ್ರಿಕೆಗಳ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:65(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಕಂಪ್ಯೂಟರ್ ಅಪ್ಲಿಕೇಶನ್ (ಬಿ.ಸಿ.ಎ.) ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:66(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಿ.ಎ./ಬಿ.ಎಸ್ಸಿ. ಕಂಪ್ಯೂಟರ್ ಅಪ್ಲಿಕೇಶನ್ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:67(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಿ.ಎಸ್ಸಿ., (ಆ್ಯನಿಮೇಷನ್ ಆ್ಯಂಡ್ ವಿಜ್ಯುವಲ್ ಇಫೆಕ್ಟ್ಸ್) ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:68(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಿ.ಕಾಂ. ಕಂಪ್ಯೂಟರ್ ಅಪ್ಲಿಕೇಶನ್ (ವೊಕೇಶನಲ್) ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:69(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಿ.ಎಸ್ಸಿ. ಕಂಪ್ಯೂಟರ್ ಸಾಯನ್ಸ್ ಐಚ್ಛಿಕ ವಿಷಯದ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:70(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಕಂಪ್ಯೂಟರ್ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:71(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಬಿ.ಎ. (ಡಾಟಾ ಪ್ರೊಸೆಸಿಂಗ್) ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಶೈ.ಸಾ.ಸ.3:72(2018–19)

**ವಿಷಯ :** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ಟೂರಿಸಂ ಅಡ್ಮಿನಿಸ್ಟ್ರೇಶನ್ ವಿಭಾಗ ಸ್ಥಾಪನೆ ಮತ್ತು ಹುದ್ದೆಗಳ ಸೃಜನೆ ಬಗ್ಗೆ ರಚಿಸಿದ ಕರಡು ಪರಿನಿಯಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:73(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ದೈಹಿಕ ಶಿಕ್ಷಣ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:74(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ತತ್ವಶಾಸ್ತ್ರ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:75(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ಭರತನಾಟ್ಯಂ, ಕರ್ನಾಟಿಕ್ ಮ್ಯೂಸಿಕ್ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:76(2018–19)

**ವಿಷಯ :** ಆಯ್ಕೆ ಆಧಾರಿತ ಶ್ರೇಯಾಂಕ ಪದ್ಧತಿಯ ಪದವಿ ಮಟ್ಟದ ತುಳು ಭಾಷಾ/ಐಚ್ಛಿಕ/ಆಯ್ಕೆ ಪತ್ರಿಕೆ ಪಠ್ಯಕ್ರಮದ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:77(2018–19)

**ವಿಷಯ :** ಎಂ.ಎ. ಕನ್ನಡ ಪದವಿಯ ನಿಯೋಜಿತ ಪ್ರಬಂಧದ ಕಾರ್ಯಯೋಜನೆ ಬಗ್ಗೆ.

**ನಿರ್ಣಯ:** ಎಂ.ಎ. ಕನ್ನಡ ಪದವಿಯ ನಿಯೋಜಿತ ಪ್ರಬಂಧದ ಕಾರ್ಯಯೋಜನೆಯ ವಿನ್ಯಾಸದಲ್ಲಿ (Structure) ಕೆಲವೊಂದು ತಿದ್ದುಪಡಿಯನ್ನು ಸೂಚಿಸಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಶೈ.ಸಾ.ಸ.3:78(2018–19)

**ವಿಷಯ :** ಎಂ.ಎಸ್ಸಿ. ಗಣಿತಶಾಸ್ತ್ರ ಪದವಿಯ ಪಠ್ಯಕ್ರಮದಲ್ಲಿ ಪ್ರಾಯೋಗಿಕ ಪಠ್ಯಕ್ರಮವನ್ನು ಅಳವಡಿಸುವ ಬಗ್ಗೆ.

**ನಿರ್ಣಯ:** ಎಂ.ಎಸ್ಸಿ. ಗಣಿತಶಾಸ್ತ್ರ ಪದವಿಯ ಪಠ್ಯಕ್ರಮದಲ್ಲಿ MTS 559 "Mathematical Statistics" ವಿಷಯದಲ್ಲಿ ಸಂಖ್ಯಾಶಾಸ್ತ್ರ ವಿಷಯ ಕಲಿತ ಪರಿಣಿತರು ಬೋಧಿಸಬೇಕೆಂಬ ಷರತ್ತಿನೊಂದಿಗೆ ಅನುಮೋದಿಸಲಾಯಿತು.

ಮಾನ್ಯ ಕುಲಪತಿಯವರು ಸದಸ್ಯರ ಸಲಹೆ ಸಹಕಾರಗಳಿಗೆ ಧನ್ಯವಾದಗಳನ್ನರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

| | |
|---|---|
| ಸಹಿ/– | ಸಹಿ/– |
| ಕುಲಸಚಿವರು | ಕುಲಪತಿಗಳು |